**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಹೆಬ್ಬಾಳ ಗ್ರಾಮ ಪಂಚಾಯತಿಗೆ 'ಹಳ್ಳಿ ಸಂತೆ' ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**
1) 2016-17 ನೇ ಸಾಲಿನ ಆಯವ್ಯಯ ಘೋಷಣೆಯ ಕ್ರಮ ಸಂಖ್ಯೆ 278
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 389 ಗ್ರಾಪಂಅ 2016, ದಿನಾಂಕ 06.07.2016
3) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 389 ಗ್ರಾಪಂಅ 2016(ಭಾಗ-3), ಬೆಂಗಳೂರು, ದಿನಾಂಕ 20.01.2017
4) ಇದೇ ಸಮಸಂಖ್ಯೆ ಆದೇಶ, ದಿನಾಂಕ 20.01.2017.

***

ಮೇಲೆ ಓದಲಾದ (1) ರಲ್ಲಿ 500 ದೊಡ್ಡ ಗ್ರಾಮ ಪಂಚಾಯತಿಗಳಲ್ಲಿ 'ಹಳ್ಳಿ ಸಂತೆ' ಏರ್ಪಡಿಸಲು ವಿಲೇಜ್ ಹಾತ್ ಮಾದರಿಯಲ್ಲಿ ರೂ. 25 ಕೋಟಿಗಳ ಅಂದಾಜು ಮೊತ್ತದಲ್ಲಿ ಮಾರುಕಟ್ಟೆಗಳನ್ನು ನಿರ್ಮಿಸಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (2) ರಲ್ಲಿ ಆಯ್ದ ಗ್ರಾಮಗಳಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆಗಳನ್ನು ನಿರ್ಮಿಸಲು 'ಹಳ್ಳಿ ಸಂತೆ' ಯೋಜನೆಯಡಿ ಪ್ರತಿ ಮಾರುಕಟ್ಟೆ ಕಟ್ಟಡಕ್ಕೆ ರೂ.31.50 ಲಕ್ಷಗಳ ಅನುದಾನವನ್ನು ನಿಗದಿಪಡಿಸಿ, ಗ್ರಾಮ ಪಂಚಾಯತಿಗಳ ವಿವಿಧ ಯೋಜನೆಗಳ ಅನುದಾನದಿಂದ ಹೊಂದಾಣಿಕೆ ಮಾಡಿಕೊಂಡು ಸದರಿ ಮಾರುಕಟ್ಟೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಹಾಗೂ ಮಾರುಕಟ್ಟೆ ನಿರ್ಮಾಣ ಮಾಡಬೇಕಾದ ಗ್ರಾಮ, ಸೂಕ್ತ ಸ್ಥಳ ಹಾಗೂ ರೂಪುರೇಷೆಯ ಬಗ್ಗೆ ವಿವರಿಸಲಾಗಿದೆ.

ಮೇಲೆ ಓದಲಾದ (3) ರಲ್ಲಿ ಪ್ರಥಮ ಹಂತದಲ್ಲಿ ಆಯ್ದ 45 ಗ್ರಾಮ ಪಂಚಾಯತಿಗಳಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಅನುಷ್ಠಾನ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು ಇವರನ್ನು ನಿಗಧಿಪಡಿಸಲಾಗಿದೆ. ಇದರೊಂದಿಗೆ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಹೆಬ್ಬಾಳ ಗ್ರಾಮದಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 879 ಗ್ರಾಪಂಅ 2017, ಬೆಂಗಳೂರು, ದಿನಾಂಕ 21.08.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಹೆಬ್ಬಾಳ ಗ್ರಾಮದಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಮಂಜೂರಾತಿ ನೀಡಿದೆ. ಮೇಲೆ ಓದಲಾದ ಸರ್ಕಾರದ ಆದೇಶದ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಅನುಷ್ಠಾನ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು,. ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು.
4) ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಗದಗ.
6) ನಿರ್ದೇಶಕರು(ಪಂ.ರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರಿಗೆ ಅಗತ್ಯ ಕ್ರಮಕ್ಕಾಗಿ.
7) ನಿರ್ದೇಶಕರು(ಗ್ರಾ.ಮೂ.ಸೌ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
8) ಅಧೀನ ಕಾರ್ಯದರ್ಶಿ(ಪ್ರ), ಆರ್ಥಿಕ ಇಲಾಖೆ, ವೆಚ್ಚ-5, ವಿಧಾನ ಸೌಧ, ಬೆಂಗಳೂರು.
9) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
10) ನಿರ್ದೇಶಕರು(ಯೋ.ಉ.ಮಾ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
11) ನಿರ್ದೇಶಕರು, ಎ.ಎನ್.ಎಸ್.ಎಸ್.ಐ.ಆರ್.ಡಿ., ಮೈಸೂರು.
12) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಶಿರಹಟ್ಟಿ.
13) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು. ಹೆಬ್ಬಾಳ ಗ್ರಾಮ ಪಂಚಾಯತಿ.
14) ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
15) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
16) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.